# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1962(2251) |
| ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಂ.ರಮೇಶ ಗೌಡ |
| ಉತ್ತರಿಸುವ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 21.03.2022 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಹಲವಾರು ಕಡತಗಳು ಕಳೆದ 2 ವರ್ಷಗಳಿಂದ ವಿಲೇವಾರಿಯಾಗದೇ ಸರ್ಕಾರದ ಹಂತದಲ್ಲಿಯೇ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/3ಬಿಇಎಂ/2020 ದಿನಾಂಕ:6.7.2020ರನ್ವಯ ಆರ್ಥಿಕ ಮಿತವ್ಯಯ ಆದೇಶ ಜಾರಿಗೊಳಿಸಿದ್ದರಿಂದ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಕಳೆದ 2 ವರ್ಷಗಳಲ್ಲಿ ಸ್ವೀಕೃತಗೊಂಡ ಪ್ರಸ್ತಾವನೆಗಳ ಪೈಕಿ ನೇಮಕಾತಿಗೆ ಸಂಬಂಧಿಸಿದಂತೆ ವಿವಿಧ ಹಂತಗಳಲ್ಲಿ ಪ್ರಸ್ತಾವನೆಗಳು ಬಾಕಿಯಿರುತ್ತವೆ. |
| ಆ | ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | |
| ಇ) | ಕಳೆದ 2 ವರ್ಷಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕೋರಿ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಆ ಪೈಕಿ ವಿಲೇವಾರಿಯಾದ, | ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕಳೆದ 2 ವರ್ಷಗಳಲ್ಲಿ ಸುಮಾರು 71 ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿಮಾಡಲು ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳು ಆಯುಕ್ತಾಲಯದಲ್ಲಿ ಸ್ವೀಕೃತವಾಗಿರುತ್ತವೆ. ಆದರೆ ಆರ್ಥಿಕ ಮಿತವ್ಯಯದ ಆದೇಶ ಜಾರಿಯಲ್ಲಿರುವ ಕಾರಣ ಸದರಿ ಪ್ರಸ್ತಾವನೆಗಳು ವಿಲೇವಾರಿಯಾಗಿರುವುದಿಲ್ಲ. ಮುಂದುವರೆದು, ತಾಂತ್ರಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಕಳೆದ 2 ವರ್ಷಗಳಲ್ಲಿ 4 ಅನುದಾನಿತ ಸಂಸ್ಥೆಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಲು |

| | | |
|---|---|---|
| | ವಿಲೇವಾರಿಯಾಗದೇ ಇರುವ ಪ್ರಸ್ತಾವನೆಗಳೆಷ್ಟು: (ಆದೇಶವನ್ನು ಪ್ರತಿಯೊಂದಿಗೆ ವಿವರ ನೀಡುವುದು) | ಕೈಗೊಂಡ ಕ್ರಮದ ವಿವರ ಈ ಕೆಳಗಿನಂತಿದೆ.<br>ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಬಿ.ವಿ.ವಿ.ಎಸ್ ಪಾಲಿಟೆಕ್ನಿಕ್, ಬಾಗಲಕೋಟೆ ಈ ಸಂಸ್ಥೆಯಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಬೋಧಕ ಹುದ್ದೆಗಳಿಗೆ ಆಯ್ಕೆಯಾದ ಒಟ್ಟು 6 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸರ್ಕಾರದ ಅನುಮೋದನೆ ನೀಡಲಾಗಿದೆ. |
| | | ಆರ್ಥಿಕ ಇಲಾಖೆಯ ಸಹಮತಿ ಮೇರೆಗೆ ಕೆ.ಹೆಚ್.ಕೆ ಪಾಲಿಟೆಕ್ನಿಕ್, ಧಾರವಾಡ ಸಂಸ್ಥೆಯಲ್ಲಿ ಖಾಲಿಯಿರುವ ವಿಜ್ಞಾನ ಉಪನ್ಯಾಸಕರ ಬ್ಯಾಕ್‌ಲಾಗ್ ಬೋಧಕ ಹುದ್ದೆ ನೇಮಕಾತಿಗೆ ಸರ್ಕಾರ ಅನುಮೋದಿಸಿರುತ್ತದೆ.<br>ಮುಂದುವರೆದು, ಸದರಿ ಸಂಸ್ಥೆಯ 9 ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ನೇಮಕಾತಿ ಕುರಿತಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 551 ಯುಪಿಸಿ 99, ದಿನಾಂಕ:07.08.2003ರಲ್ಲಿ ಪ್ರಕಟಿಸಲಾದ Karnataka Educational Institutions (Collegiate Education) Rules, 2003 ನಿಯಮ (8)(2)ರನ್ವಯ ದಿನಾಂಕ:01.03.2001ರ ನಂತರ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿ ಉಂಟಾದ ಬೋಧಕೇತರ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲವೆಂದು ಸರ್ಕಾರದ ಪತ್ರ ಸಂಖ್ಯೆ:ಇಡಿ 44 ಟಿಪಿಇ 2021, ದಿನಾಂಕ: 30.10.2021ರಲ್ಲಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರಿಗೆ ತಿಳಿಸಲಾಗಿದೆ.<br>ಎಸ್.ಇ.ಎಸ್ ಪಾಲಿಟೆಕ್ನಿಕ್ (ಅನುದಾನಿತ), ಸಿರಗುಪ್ಪ ಈ ಸಂಸ್ಥೆಯಲ್ಲಿ ಖಾಲಿ ಇರುವ ಸಿವಿಲ್ ಇಂಜಿನಿಯರ್ ವಿಭಾಗದ ಉಪನ್ಯಾಸಕರು ಬ್ಯಾಕ್‌ಲಾಗ್ ಹುದ್ದೆಗೆ ಮತ್ತು ಗ್ರೂಪ್ ಡಿ ಬ್ಯಾಕ್‌ಲಾಗ್ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತಂತೆ ಆಯುಕ್ತಾಲಯದಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 02 ಬಿಇಎಂ 2021, ದಿನಾಂಕ: 24.11.2021ರನ್ವಯ ಸಹಮತಿ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ.<br>ಜೆ.ಎಸ್.ಎಸ್ ಮಹಿಳಾ ಪಾಲಿಟೆಕ್ನಿಕ್ (ಅನುದಾನಿತ), ಮೈಸೂರು ಈ ಸಂಸ್ಥೆಯಲ್ಲಿ ಖಾಲಿಯಿರುವ 8 ಬ್ಯಾಕ್‌ಲಾಗ್ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸರ್ಕಾರದ ಅನುಮೋದನೆ ಕೋರಿ ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ಪತ್ರ ಸಂಖ್ಯೆ:ಡಿಟಿಇ 12 ಇಎಸ್‌ಟಿ (4)ಬಿ 2009, ದಿನಾಂಕ:23.01.2020ರಲ್ಲಿ ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಸ್ತಾವನೆಯ ಕೆಲವು ಅಂಶಗಳ ಬಗ್ಗೆ ಸರ್ಕಾರದ ಪತ್ರ ಸಂಖ್ಯೆ:ಇಡಿ 66 ಟಿಪಿಇ 2020, ದಿನಾಂಕ: 30.07.2021ರಲ್ಲಿ ಸ್ಪಷ್ಟೀಕರಣ ಕೋರಲಾಗಿ ಈ ಸಂಬಂಧ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ದಿನಾಂಕ: 20.01.2022ರಲ್ಲಿ ಸರ್ಕಾರಕ್ಕೆ ಮರು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಹುದ್ದೆಗಳ |

| | | |
|---|---|---|
| | | ನೇಮಕಾತಿಗೆ ಸರ್ಕಾರದ ಅನುಮೋದನೆ ನೀಡುವ ಸಂಬಂಧ ಸಹಮತಿ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ.<br>ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಿಗೆ ಸಂಬಂಧಪಟ್ಟಂತೆ ಮಂಗಳೂರು ಮತ್ತು ಕರ್ನಾಟಕ ವಿಶ್ವವಿದ್ಯಾನಿಲಯದಿಂದ ಒಟ್ಟು 02 ಪ್ರಸ್ತಾವನೆಗಳು ಸರ್ಕಾರದಲ್ಲಿ ಸ್ವೀಕೃತವಾಗಿದ್ದು ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿದೆ. |
| ಈ) | ಬ್ಯಾಕ್‌ಲಾಗ್ ಹುದ್ದೆಗಳ ಕಡತಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯಲ್ಲಿ ಚರ್ಚಿಸಿ ಸರ್ಕಾರಕ್ಕೆ ನಿರ್ದೇಶನ ನೀಡಿದ್ದರೂ ಸಹ ಕಡತಗಳು ವಿಲೇವಾರಿಯಾಗದೇ ವಿಳಂಬವಾಗುವುದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು? (ಕಾರಣಗಳೊಂದಿಗೆ ಸಂಪೂರ್ಣ ವಿವರ ನೀಡುವುದು) | ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020ರಲ್ಲಿ ಕೋವಿಡ್ 19 ಹಿನ್ನೆಲೆಯಲ್ಲಿ, 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳನ್ನು ಹಾಗೂ ಬ್ಯಾಕ್‌ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.<br>ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 02 ಬಿಇಎಂ 2021 ದಿನಾಂಕ:24.11.2021ರಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ನೇರ ನೇಮಕಾತಿಯಡಿ ಬಾಕಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳನ್ನು ಮುಂದುವರೆಸಿ, ಭರ್ತಿಮಾಡಿಕೊಳ್ಳಲು ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020ರಿಂದ ವಿನಾಯಿತಿ ನೀಡಲಾಗಿದೆ. ಅದರಂತೆ, ಕಲ್ಯಾಣ ಕರ್ನಾಟಕದ ಹುದ್ದೆಗಳನ್ನು ಭರ್ತಿಮಾಡಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.<br>ಉಳಿದಂತೆ, ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುವ ಬೋಧಕ/ ಬೋಧಕೇತರ ಹುದ್ದೆಗಳನ್ನು ಭರ್ತಿಮಾಡುವ ಸಂಬಂಧ ಆರ್ಥಿಕ ಇಲಾಖೆಯ ನಿರ್ಬಂಧ ತೆರವಾದ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು. |

ಇಡಿ 10 ಅಅವಿ 2022

**(ಡಾ.ಅಶ್ವತ್ಥ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ ಮತ್ತು ಬಿಟಿ ವಿಜ್ಞಾನ
ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು